Akashvani : Bangalore
Regional Bulletin In Kannada
24.10.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದಲ್ಲಿ ಬಂಡವಾಳ ಹೂಡಿಕೆ ಸ್ನೇಹಿ ವಾತಾವರಣ ಸೃಷ್ಟಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ
- ಹುಬ್ಬಳ್ಳಿಯಲ್ಲಿ ರೋಜ್‌ಗಾರ್ ಉದ್ಯೋಗ ಮೇಳ ; ೭೫ ಮಂದಿಗೆ ನೇಮಕಾತಿ ಆದೇಶ ಪತ್ರ ವಿತರಿಸಿದ ಸಚಿವ ಪ್ರಲ್ಹಾದ್ ಜೋಶಿ
- ಈರುಳ್ಳಿ ಬೆಲೆ ಕುಸಿತ ಹಿನ್ನೆಲೆ ; ಪಿಡಿಪಿಎಸ್ ಅಡಿಯಲ್ಲಿ ಖರೀದಿಸಲು ಚಿಂತನೆ - ಸಚಿವ ಶಿವಾನಂದ ಪಾಟೀಲ್
- ಕರ್ನೂಲ್ ಬಸ್ ದುರಂತ ; ಉನ್ನತ ಮಟ್ಟದ ತನಿಖೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗ್ರಹ
- ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ - ಇದೇ ೨೮ಕ್ಕೆ ಶಾಂತಿ ಸಭೆ ನಡೆಸುವಂತೆ ಉಚ್ಚನ್ಯಾಯಾಲಯದ ಕಲಬುರಗಿ ಪೀಠ ಸೂಚನೆ

****************

ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರ ಸ್ನೇಹಿ ವಾತಾವರಣವನ್ನು ಇನ್ನಷ್ಟು ಉತ್ತಮಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಉನ್ನತಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ ೬೬ನೇ ಸಭೆಯಲ್ಲಿ ಮಾತನಾಡಿದ ಅವರು, ಭೂಬಳಕೆ ಬದಲಾವಣೆ ಪ್ರಕ್ರಿಯೆ ಸೇರಿದಂತೆ ವಿವಿಧ ನಿರಪೇಕ್ಷಣಾ ಪತ್ರ ನೀಡಿಕೆಯ ಕಾಲಮಿತಿಯನ್ನು ಕಡಿಮೆ ಮಾಡಬೇಕು ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಿದರೆ ಮಾತ್ರ ಉದ್ಯೋಗಸೃಷ್ಟಿ ಸಾಧ್ಯ ಎಂದು ಹೇಳಿದ್ದಾರೆ. ಕೈಗಾರಿಕೆಗಳಿಗೆ ರಸ್ತೆ, ನೀರು,

ವಿದ್ಯುತ್ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

***************

ರಾಜ್ಯದಲ್ಲಿ ೧೩ ಕಂಪನಿಗಳಿಂದ ೨೭ ಸಾವಿರ ಕೋಟಿ ರೂಪಾಯಿ ಹೂಡಿಕೆಗೆ ಒಪ್ಪಿಗೆ ಸೂಚಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೩ ಯೋಜನೆಗಳಿಂದ ೮ ಸಾವಿರದ ೭೦೪ ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ತಿಳಿಸಿದ್ದಾರೆ. ೧೧ ಹೊಸ ಹೂಡಿಕೆಗಳ ಯೋಜನೆಗಳ ಪೈಕಿ ಜಿಂದಾಲ್ ಸ್ಟೀಲ್ಸ್ ೧ ಸಾವಿರದ ೩೦೦ ಕೋಟಿ, ಜಿಂದಾಲ್ ಎಲೆಕ್ಟ್ರಿಕಲ್ ಸ್ಟೀಲ್ಸ್ ೭ ಸಾವಿರದ ೧೦೨ ಕೋಟಿ, ಟೊಯೊಟಾ ಇಂಡ್ರಸ್ಟ್ರೀಸ್ ೧ ಸಾವಿರದ ೩೩೦ ಕೋಟಿ ಸೇರಿದಂತೆ ಹಲವು ಸಂಸ್ಥೆಗಳು ೨೭ ಸಾವಿರ ಕೋಟಿ ಹೂಡಿಕೆ ಮಾಡಲಿವೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಯುವಕರು ತಮ್ಮ ಸಾಮರ್ಥ್ಯ, ಶ್ರಮ ಹಾಗೂ ನಿಷ್ಠೆಯಿಂದ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯ ವಿದ್ಯಾನಗರದಲ್ಲಿ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಉದ್ಯೋಗಗಳ ಭರ್ತಿ ಪ್ರಕ್ರಿಯೆಯು ಸಂಪೂರ್ಣವಾಗಿ ನ್ಯಾಯಸಮ್ಮತವಾಗಿದ್ದು, ಅರ್ಹತೆಯ ಆಧಾರದಲ್ಲೇ ನೇಮಕಾತಿ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಪ್ರಲ್ಹಾದ್ ಜೋಶಿ (30 ಸೆಕೆಂಡುಗಳು)

ಭಾರತೀಯ ಅಂಚೆ ಇಲಾಖೆಯ ೪೨, ಭಾರತೀಯ ರೈಲ್ವೆ ಇಲಾಖೆ ೧೪, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ೫, ಸಿ.ಆರ್.ಪಿ.ಎಫ್‌ನ ೪ ಮಂದಿ ಸೇರಿದಂತೆ ೬೫ ಮಂದಿಗೆ ನೇಮಕಾತಿ ಆದೇಶ ಪತ್ರವನ್ನು ಸಚಿವರು ವಿತರಿಸಿದರು.

***************

ಈರುಳ್ಳಿ ಬೆಲೆ ಕುಸಿತ ಹಿನ್ನೆಲೆಯಲ್ಲಿ ಪಿಡಿಪಿಎಸ್ ಅಡಿಯಲ್ಲಿ ಖರೀದಿಸುವ ಪ್ರಯತ್ನ ನಡೆದಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಸುರಿದ ಭಾರೀ ಮಳೆಗೆ ಕಟಾವಿಗೆ ಬಂದಿರುವ ಈರುಳ್ಳಿ ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ ಎಂದು ಅಧಿಕಾರಿಗಳು ವರದಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಪಿಡಿಪಿಎಸ್ ಅಡಿಯಲ್ಲಿ ಈರುಳ್ಳಿ ಖರೀದಿ ಮಾಡಲು ಅನುಮತಿ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರು ಸೇರಿ ಒಟ್ಟು ೨ ಲಕ್ಷಕ್ಕೂ ಹೆಚ್ಚು ಹೆಕ್ಟೇರ್ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲಾಗುತ್ತಿದ್ದು, ವಾರ್ಷಿಕ ಉತ್ಪನ್ನ ೨೮ ಲಕ್ಷ ಮೆಟ್ರಿಕ್ ಟನ್‌ಗಳಾಗಿದೆ.

****************

ಕರ್ನೂಲ್ ಬಸ್ ದುರಂತದ ಬಗ್ಗೆ ಉನ್ನತಮಟ್ಟದ ತನಿಖೆ ನಡೆಸುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದಲ್ಲಿ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ ಎಂದು ತಿಳಿಸಿದ್ದಾರೆ. ಎಲ್ಲಾ ರಾಜ್ಯಗಳ ಸರ್ಕಾರಗಳು ಈ ಬಗ್ಗೆ ಗಮನ ಹರಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಪಕ್ಷದಲ್ಲಿನ ನಾಯಕತ್ವ ವಿಚಾರ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಶಿಸ್ತು ಕಾಂಗ್ರೆಸ್ ಪಕ್ಷದ ಆದ್ಯತೆ. ಈ ವಿಚಾರವಾಗಿ ಈಗ ಮಾತನಾಡುವುದಿಲ್ಲ. ಯಾರ ಬಳಿ ಚರ್ಚಿಸಬೇಕೊ ಅವರೊಂದಿಗೆ ಮಾತನಾಡುವುದಾಗಿ ಹೇಳಿದ್ದಾರೆ.

****************

ಕಲಬುರಗಿಯ ಚಿತ್ತಾಪುರದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥ ಸಂಚಲನಕ್ಕೆ ನವೆಂಬರ್ ೨ ರಂದು ಅವಕಾಶ ನೀಡುವ ಕುರಿತು ರಾಜ್ಯ ಹೈಕೋರ್ಟ್‌ನ ಕಲಬುರಗಿ ಪೀಠವು ಇಂದು ವಿಚಾರಣೆ ನಡೆಸಿತು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ.ಎಸ್. ಕಮಲಾ, ಇದೇ ೨೮ರಂದು ಎಲ್ಲಾ ಸಂಘಟನೆಗಳೊಂದಿಗೆ ಶಾಂತಿ ಸಭೆ ನಡೆಸಿ, ಇದೇ ೩೦ರಂದು ವರದಿ

ಸಲ್ಲಿಸುವಂತೆ ನಿರ್ದೇಶನ ನೀಡಿದೆ. ಪ್ರಕರಣದ ಶೀಘ್ರ ಇತ್ಯರ್ಥಕ್ಕೆ ಪ್ರಯತ್ನಿಸುವಂತೆ ನ್ಯಾಯಾಲಯ ಸಲಹೆ ನೀಡಿದೆ.

***************

ರಕ್ಷಣಾ ಪಡೆಗಳು ಯುದ್ಧಕ್ಕೆ ಸಿದ್ಧವಾಗಲು ಮಿಲಿಟರಿ ತರಬೇತಿಯಲ್ಲಿ ಬದಲಾವಣೆ ಅಗತ್ಯ ಎಂದು ವಾಯುಪಡೆ ಮುಖ್ಯಸ್ಥ ಏರ್‌ಚೀಪ್ ಮಾರ್ಷಲ್ ಎ.ಪಿ. ಸಿಂಗ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ತರಬೇತಿ ಕಮಾಂಡರ್‌ಗಳ ಸಮ್ಮೇಳನ ೨೦೨೫ರ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ವಿಷಯ ತಿಳಿಸಿದ್ದಾರೆ. ಸಮ್ಮೇಳನದಲ್ಲಿ ತರಬೇತಿ ತತ್ವಶಾಸ್ತ್ರದ ಪರಿವರ್ತನೆ, ಮೂಲಸೌಕರ್ಯದ ಆಧುನೀಕರಣ, ಭಾರತೀಯ ವಾಯುಪಡೆಯ ವಿಕಸನಗೊಳ್ಳುತ್ತಿರುವ ಕಾರ್ಯಾಚರಣೆಯ ಅಗತ್ಯಗಳಿಗೆ ಅನುಗುಣವಾಗಿ ಬೋಧನಾ ಪದ್ಧತಿಗಳ ಅಳವಡಿಕೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಯಿತು. ಕಾರ್ಯಕ್ರಮದಲ್ಲಿ ವಾಯುಪಡೆಯ ಕೇಂದ್ರಗಳಿಗೆ ಟ್ರೋಫಿಗಳನ್ನು ಪ್ರದಾನ ಮಾಡಿದ ಏರ್ ಚೀಫ್ ಮಾರ್ಷಲ್ ಪ್ರೈಡ್ ಆಫ್ ದಿ ಟ್ರೈನಿಂಗ್ ಕಮಾಂಡ್ ಟ್ರೋಫಿಯನ್ನು ವಾಯುಪಡೆ ಅಕಾಡೆಮಿಗೆ ನೀಡಿದರು.

***************

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೮ ರಂದು ಆಕಾಶವಾಣಿಯ ಜನಪ್ರಿಯ ಮನ್ ಕಿ ಬಾತ್‌ನಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೮ನೇ ಸಂಚಿಕೆಯಾಗಲಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

***************

ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿಯೂ ಖಾಲಿ ಇಲ್ಲ, ಪ್ರದೇಶ ಕಾಂಗ್ರೆಸ್ ಅಧ್ಯಕ್ಷರ ಹುದ್ದೆಯೂ ಖಾಲಿ ಇಲ್ಲ. ಈ ಬಗ್ಗೆ ಚರ್ಚೆಯೇ ಅಪ್ರಸ್ತುತ ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರಿಷತ್

ಸದಸ್ಯ ಯತೀಂದ್ರ ಅವರ ಮಾತುಗಳನ್ನು ಮುಖ್ಯಮಂತ್ರಿಗಳ ಧ್ವನಿ ಎಂಬಂತೆ ಬಿಂಬಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

****************

ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ನಡೆಸಿ ಹಾಡಿ ಜನಗಳಿಗೆ ಜಾಗೃತಿ ಮೂಡಿಸುವಂತೆ ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅರುಣ್‌ಕುಮಾರ್ .ಎಸ್ ತಿಳಿಸಿದ್ದಾರೆ. ಮೈಸೂರಿನ ಜಿಲ್ಲಾ ಪಂಚಾತ್‌ನಲ್ಲಿ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಡಬೇಕು ಎಂದು ಹೇಳಿದ್ದಾರೆ. ಕಳಪೆ ಗುಣಮಟ್ಟದ ಅಕ್ಕಿ, ರಾಗಿ ಸರಬರಾಜು ಆಗದಂತೆ ಅಧಿಕಾರಿಗಳು ಪರಿಶೀಲನೆ ನಡೆಸಬೇಕು ಎಂದು ತಿಳಿಸಿದ್ದಾರೆ.

****************

ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯ ದೃಷ್ಟಿಯಿಂದ  ವಿವಿಧ ಇಲಾಖೆಗಳಿಂದ ನೀಡಲಾಗುವ ಸೌಲಭ್ಯಗಳ ಕುರಿತಾಗಿ ಅಲ್ಪಸಂಖ್ಯಾತರಿಗೆ ಜಾಗೃತಿ ಮೂಡಿಸಿ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಪ್ರಧಾನ ಮಂತ್ರಿಗಳ  ಹೊಸ ೧೫ ಅಂಶಗಳ ಕಾರ್ಯಕ್ರಮ ಸಂಬಂಧ ಪ್ರಸಕ್ತ  ಸಾಲಿನ ವಿವಿಧ ಇಲಾಖೆಗಳ ತ್ರೈಮಾಸಿಕ ಕಾರ್ಯಕ್ರಮವಾರು ಸಾಧಿಸಲಾಗಿರುವ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಲ್ಪಸಂಖ್ಯಾತರು ಹೆಚ್ಚು ವಾಸಿಸುವ ಸ್ಥಳಗಳಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿಯೊಂದಿಗೆ ಕೈ ಜೋಡಿಸಿ ಮಾಹಿತಿಯನ್ನು ತಲುಪಿಸಿ ಎಂದು ನಿರ್ದೇಶನ ನೀಡಿದ್ದಾರೆ.

****************

ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಯಾಗಿ ಐವತ್ತು ವ? ಪೂರೈಸಿರುವ ಹಿನ್ನೆಲೆಯಲ್ಲಿ ದಾವಣಗೆರೆಯಲ್ಲಿ ನವೆಂಬರ್ ೫ ರಂದು ಸುವರ್ಣ ಮಹೋತ್ಸವ ಆಚರಣೆ ಹಮ್ಮಿಕೊಳ್ಳಲಾಗಿದೆ ಎಂದು  ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಾವೇರಿ ಮತ್ತು ದಾವಣಗೆರೆ  ಜಿಲ್ಲೆ  ಒಳಗೊಂಡಂತೆ ಸುವರ್ಣ

ಮಹೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಮಂಡಳಿಯ ಕಾರ್ಯ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು, ಪರಿಸರ ಸಂರಕ್ಷಣಾ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನು?ನಗೊಳಿಸುವ ಬಗ್ಗೆ ತಿಳುವಳಿಕೆ ಮೂಡಿಸಲಾಗುವುದು ಎಂದು ಹೇಳಿದ್ದಾರೆ.

****************

ಭಾರತೀಯ ರೆಡ್ ಕ್ರಾಸ್ ಚಿಕ್ಕಬಳ್ಳಾಪುರ ಜಿಲ್ಲಾ ರಕ್ತನಿಧಿ ಕೇಂದ್ರದಲ್ಲಿ ಪ್ರಯೋಗಶಾಲಾ ತಂತ್ರಜ್ಞರ ೨ ಹುದ್ದೆಗಳು ಖಾಲಿ ಇದ್ದು, ಅರ್ಹ ಆಸಕ್ತ ಅಭ್ಯರ್ಥಿಗಳು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪಿಯುಸಿ ವಿಜ್ಞಾನ ಹಾಗೂ ಡಿಎಂಎಲ್‌ಟಿ ಕೋರ್ಸ್ ವಿದ್ಯಾರ್ಹತೆ ಹೊಂದಿರಬೇಕು. ಚಿಕ್ಕಬಳ್ಳಾಪುರ ನಗರದಲ್ಲಿ ವಾಸಿಸುವ ಹಾಗೂ ಬೇರೆ ರಕ್ತ ನಿಧಿ ಕೇಂದ್ರಗಳಲ್ಲಿ ಸೇವೆ ಸಲ್ಲಿಸಿ ಅನುಭವ ಇರುವ ಆಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಭಾರತೀಯ ರೆಡ್ ಕ್ರಾಸ್ ರಕ್ತ ನಿಧಿ ಕೇಂದ್ರದ ಪ್ರಕಟಣೆ ತಿಳಿಸಿದೆ.

****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕುಷ್ಠರೋಗ ಹೊಂದಿರುವ ಮತ್ತು ಕುಷ್ಠರೋಗದಿಂದ ಅಂಗವಿಕಲತೆಗೆ ಬಾಧಿತರಾದವರು ಸೇರಿದಂತೆ ಒಟ್ಟು ೨೦ ಸಕ್ರಿಯ ಪ್ರಕರಣಗಳು ದಾಖಲಾಗಿವೆ.

****************

<u>ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ</u>